ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಸಂಖ್ಯೆ/ಹಿಂವಕಇ/ವಿವೇ/ಸಿಆರ್-34/2014-15

ಆಯುಕ್ತರ ಕಛೇರಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
ನಂ.16 ಡಿ, 3ನೇ ಮಹಡಿ, ದೇವರಾಜ ಅರಸು ಭವನ
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ
ಬೆಂಗಳೂರು-52, ದಿನಾಂಕ: 14.08.2014

# ಪ್ರಕಟಣೆ

## 2014-15ನೇ ಸಾಲಿಗೆ "ಊಟ ಮತ್ತು ವಸತಿ ಸಹಾಯ ಯೋಜನೆ (ವಿದ್ಯಾಸಿರಿ) ಮತ್ತು "ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ" ಕ್ಕೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ

(ಸರ್ಕಾರಿ ಅಥವಾ ಅನುದಾನಿತ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ಪಡೆದವರು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವ್ಯಾಪ್ತಿಗೆ ಒಳಪಡುವ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.)

***ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:10.09.2014***

**ಅರ್ಜಿ ಸಲ್ಲಿಸಲು karepass.cgg.gov.in ಹಾಗೂ www.backwardclasses.kar.nic.in ಸಂಪರ್ಕಿಸಬಹುದು.**

**ಅರ್ಜಿ ಸಲ್ಲಿಸುವ ಅಭ್ಯರ್ಥಿಗಳಿಗೆ ಸೂಚನೆಗಳು**

1. (ಅ) ಯಾವುದೇ ಇಲಾಖೆಯ ಸರ್ಕಾರಿ / ಸರ್ಕಾರಿ ಅನುದಾನಿತ ವಿದ್ಯಾರ್ಥಿನಿಲಯ / ವಸತಿ ಕಾಲೇಜುಗಳಲ್ಲಿ ಪ್ರವೇಶ ದೊರೆಯದ ಹಾಗೂ ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ, ಈ ಸೌಲಭ್ಯವನ್ನು ಒದಗಿಸಲಾಗುವುದು.

   (ಆ) (i) ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ, (ii)ಊಟ ಮತ್ತು ವಸತಿ ಸಹಾಯ ಯೋಜನೆ ಮತ್ತು (iii) ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಇವುಗಳಲ್ಲಿ ಒಬ್ಬ ವಿದ್ಯಾರ್ಥಿ, ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರು.

   (ಇ) ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್‌ಲೈನ್ (Online) ಮೂಲಕ ಅರ್ಜಿ ಸಲ್ಲಿಸಬೇಕು.

2. (ಅ) ಭಾರತದ ಪ್ರಜೆಯಾಗಿದ್ದು, ಕರ್ನಾಟಕದ ಖಾಯಂ ನಿವಾಸಿ ಆಗಿರಬೇಕು.

   (ಆ) ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.

   (ಇ) ಕರ್ನಾಟಕ ಶಾಸನಬದ್ಧ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ ಸ್ಥಳೀಯ ಸಂಸ್ಥೆ / ಅನುದಾನಿತ ಸಂಸ್ಥೆಗಳು / ಮಾನ್ಯತೆ ಪಡೆದ ಅನುದಾನರಹಿತ ಖಾಸಗಿ ಸಂಸ್ಥೆಗಳಲ್ಲಿ – ಮೆಟ್ರಿಕ್-ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.

3. (ಅ) ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ-ತಾಯಿ / ಪೋಷಕರ ಕುಟುಂಬದ ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು.

   (i) ಪ್ರವರ್ಗ-1ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ

   (ii) ಪ್ರವರ್ಗ-2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ

4. (ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂ.ಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

(ಆ) ಸ್ನಾತಕೋತ್ತರ, ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

(ಇ) ಕಲೆ, ವಿಜ್ಞಾನ ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ / ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೊಮಾ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

(ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

5. **ನವೀಕರಣ ವಿದ್ಯಾರ್ಥಿಗಳು** (2013-14ನೇ ಸಾಲಿನಲ್ಲಿ ಊಟ ಮತ್ತು ವಸತಿ ಸಹಾಯ ಯೋಜನೆ/ಮೆಟ್ರಿಕ್-ನಂತರದ ವಿದ್ಯಾರ್ಥಿವೇತನ ಯೋಜನೆಗಳಲ್ಲಿ ಮಂಜೂರಾದ ವಿದ್ಯಾರ್ಥಿಗಳು ಮಾತ್ರ) ಹಾಗೂ **ಹೊಸದಾಗಿ ಅರ್ಜಿ ಸಲ್ಲಿಸುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು** ಈ ಮೇಲಿನ ಎರಡೂ ಯೋಜನೆಗಳಿಗೆ **ಒಂದೇ ಅರ್ಜಿಯನ್ನು** ಸಲ್ಲಿಸಬೇಕು.

6. ಈ ಕೆಳಗಿನ ಮೂಲ ದಾಖಲೆಗಳನ್ನು ಪ್ರತ್ಯೇಕವಾಗಿ ಸ್ಕ್ಯಾನ್ ಮಾಡಿ, ಅರ್ಜಿ ಸಲ್ಲಿಸುವಾಗ ಅಪ್‌ಲೋಡ್ ಮಾಡಬೇಕು.

**[ಪ್ರತಿ ದಾಖಲೆಯು 100 Kb JPG Format ಇರಬೇಕು]**

1) ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
2) ಹಿಂದಿನ ವರ್ಷದಲ್ಲಿ ಉತ್ತೀರ್ಣರಾದ ಮೂಲ ಅಂಕಪಟ್ಟಿ.
3) ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಯಾವುದಾದರೂ ರಾಷ್ಟ್ರೀಕೃತ ಬ್ಯಾಂಕಿನಲ್ಲಿ, ವಿದ್ಯಾರ್ಥಿಯ ಹೆಸರಿನಲ್ಲಿ ಉಳಿತಾಯ ಖಾತೆಯನ್ನು ತೆರೆದಿರಬೇಕು. (ಹೆಸರು, ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ಇರುವ ರೀತಿಯಲ್ಲಿ ಇರಬೇಕು.) ಪಾಸ್‌ಬುಕ್ ಹೊಂದಿರಬೇಕು. ಬ್ಯಾಂಕ್ ಅಕೌಂಟ್ ನಂಬರ್ ಮತ್ತು **IFSC** ಕೋಡ್ ಇರುವ ಮೊದಲ ಪುಟದ ಭಾಗದ ಪ್ರತಿ ಸಲ್ಲಿಸಬೇಕು. ವಿದ್ಯಾರ್ಥಿಯು ಉಳಿತಾಯ ಖಾತೆ ಸಂಖ್ಯೆ ಹಾಗೂ **IFSC** ಕೋಡ್ ತಪ್ಪಿಲ್ಲದಂತೆ ನಮೂದಿಸಬೇಕು. ವಿದ್ಯಾರ್ಥಿಯು ತಪ್ಪಾಗಿ ನಮೂದು ಮಾಡಿದಲ್ಲಿ ಪರಿಷ್ಕರಣೆಗೆ ಅವಕಾಶ ಇರುವುದಿಲ್ಲ.
4) ಪಡಿತರ ಚೀಟಿ ಇದ್ದಲ್ಲಿ ಅದರ ಪ್ರತಿ.

7. ಹೆಚ್ಚಿನ ವಿವರಗಳು ಹಾಗೂ ಈ ಕಾರ್ಯಕ್ರಮಗಳ ಸರ್ಕಾರದ ಆದೇಶಗಳಿಗಾಗಿ ವಿದ್ಯಾರ್ಥಿಗಳು ಸಂಬಂಧಿಸಿದ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು / ತಾಲ್ಲೂಕು ಹಿಂದುಳಿದ ವರ್ಗಗಳ ವಿಸ್ತರಣಾಧಿಕಾರಿಗಳನ್ನು ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್‌ಸೈಟ್ www.backwardclasses.kar.nic.in ಹಾಗೂ karepass.cgg.gov.in ಸಂಪರ್ಕಿಸಬಹುದು.

**ದಿನಾಂಕ: 14.08.2014**

ಆಯುಕ್ತರು
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
ಬೆಂಗಳೂರು.

E:\BCM-1\BCM\SCH\Prakatane.docx